# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 532 (617) |
| ಮಾನ್ಯ ಸದಸ್ಯರ ಹೆಸರು | : ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : 09.03.2026. |
| ಉತ್ತರಿಸುವ ಸಚಿವರು | : ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರಗಳು |
|---|---|---|
| ಅ. | ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಮಂಜೂರು ಮಾಡಲು ಇರುವ ಸರ್ಕಾರದ ಮಾನದಂಡಗಳೇನು; | ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಹೊಸದಾಗಿ ಸ್ಥಾಪನೆ ಮಾಡಲು ನ್ಯಾಷನಲ್ ಮೆಡಿಕಲ್ ಕೌನ್ಸಿಲ್ (NMC)ನ ಮಾರ್ಗಸೂಚಿಗಳನ್ನುಅನುಸರಿಸಲಾಗುತ್ತಿದೆ. ಅದರನ್ವಯ, ಅಗತ್ಯ ನಿವೇಶನ, ಕಟ್ಟಡ, ಬೋಧನಾ ಆಸ್ಪತ್ರೆ, ಬೋಧಕ-ಬೋಧಕೇತರ ಸಿಬ್ಬಂದಿಗಳು ಹಾಗೂ ಇತರೆ ಮೂಲಭೂತ ಸೌಲಭ್ಯಗಳನ್ನು ಹೊಂದಿರಬೇಕಾಗಿರುತ್ತದೆ. |
| ಆ. | ತಾಲ್ಲೂಕು ಕೇಂದ್ರಗಳಿಗೆ ಈವರೆಗೆ ಎಷ್ಟು ವೈದ್ಯಕೀಯ ಕಾಲೇಜುಗಳನ್ನು ಸರ್ಕಾರ ಮಂಜೂರು ಮಾಡಿದೆ; | ರಾಜ್ಯದ ಪ್ರತಿ ಜಿಲ್ಲೆಗೊಂದು ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಬೇಕೆಂಬುದು ಸರ್ಕಾರದ ನೀತಿಯಾಗಿರುತ್ತದೆ. |
| ಇ. | ಮಾಡಿದ್ದಲ್ಲಿ, ಸಿಂಧನೂರು ತಾಲ್ಲೂಕಿಗೆ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಮಂಜೂರು ಮಾಡಲು ಪೂರೈಕೆಯಾಗದಿರುವ ಮಾನದಂಡಗಳೇನು; | 2023-24ನೇ ಸಾಲಿನ ಆಯವ್ಯಯ ಭಾಷಣದಲ್ಲಿ "ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ವತಿಯಿಂದ ಬೆಂಗಳೂರು ದಕ್ಷಿಣ ಜಿಲ್ಲೆಯ ಕನಕಪುರ ತಾಲ್ಲೂಕಿನಲ್ಲಿ ಒಂದು ಹೊಸ ವೈದ್ಯಕೀಯ ಕಾಲೇಜು ಸ್ಥಾಪಿಸಲಾಗುವುದು' ಎಂದು ಘೋಷಿಸಲಾಗಿದ್ದು, ಅದರಂತೆ ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 144 ಆರ್‌ಜಿಯು 2023 ದಿನಾಂಕ: 06.01.2025ರಲ್ಲಿ ಕನಕಪುರದಲ್ಲಿ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಸದರಿ ತಾಲ್ಲೂಕನ್ನು ಹೊರತುಪಡಿಸಿ ರಾಜ್ಯದ ಇತರೆ ಯಾವುದೇ ತಾಲ್ಲೂಕು ಕೇಂದ್ರದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಿರುವುದಿಲ್ಲ. |
| ಈ | ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕಿಗೆ ವೈದ್ಯಕೀಯ ಕಾಲೇಜನ್ನು ಮಂಜೂರು ಮಾಡಲಾಗುವುದು? | ರಾಯಚೂರು ಜಿಲ್ಲೆಯಲ್ಲಿ ಈಗಾಗಲೇ ಸರ್ಕಾರಿ ವೈದ್ಯಕೀಯ ಕಾಲೇಜು ಕಾರ್ಯನಿರ್ವಹಿಸುತ್ತಿದ್ದು, ಪ್ರಸ್ತುತ ಸಿಂಧನೂರು ತಾಲ್ಲೂಕಿನಲ್ಲಿ ವೈದ್ಯಕೀಯ ಕಾಲೇಜು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಹಂತದಲ್ಲಿ ಬಾಕಿ ಇರುವುದಿಲ್ಲ. |

ಸಂಖ್ಯೆ:ಎಂಇಡಿ 126 ಎಂಎಂಸಿ 2026

(ಡಾ. ಶರಣಪ್ರಕಾಶ ಆರ್. ಪಾಟೀಲ)
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ,ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು